## ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

ಇಮೇಲ್:commissioner.pue@gmail.comಫೋನ್:080-23561944ಫ್ಯಾಕ್ಸ್:23361852.

ಸಂಖ್ಯೆ:ಪಿಯುಇ/ಕಟ್ಟಡ-03/ಕಾ.ಪ್ರ.ಮಾ/2020-21 ದಿನಾಂಕ:25-09-2020.

## ಸುತ್ತೋಲೆ

1. ರಾಜ್ಯದ ಸರ್ಕಾರಿ ಪದವಿಪೂರ್ವ ಕಾಲೇಜುಗಳಿಗೆ ಉತ್ತಮ ಶೈಕ್ಷಣಿಕ ವಾತಾವರಣ ಕಲ್ಪಿಸುವ ಸಲುವಾಗಿ ಮೂಲಭೂತ ಸೌಲಭ್ಯಗಳಾದ ಕಟ್ಟಡ ನಿರ್ಮಾಣ/ಹೆಚ್ಚುವರಿ ತರಗತಿ ಕೊಠಡಿ/ ಪ್ರಯೋಗಾಲಯ ಕೊಠಡಿ/ ಶೌಚಾಲಯ ನಿರ್ಮಾಣ, ಕಟ್ಟಡ ನವೀಕರಣ/ದುರಸ್ಥಿ ಮತ್ತು ಪ್ರಯೋಗಾಲಯ ಉಪಕರಣ ಹಾಗೂ ತರಗತಿ ಪೀಠೋಪಕರಣಗಳು ಇತ್ಯಾದಿ ಸೌಲಭ್ಯಗಳನ್ನು ವಿವಿಧ ಯೋಜನೆಗಳಡಿ ಒದಗಿಸಲಾದ ಅನುದಾನದ ಲಭ್ಯತೆಯ ಆಧಾರದ ಮೇಲೆ ಇಲಾಖೆಯು ಒದಗಿಸುತ್ತಾ ಬಂದಿರುವುದು ಸರಿಯಷ್ಟೆ. ಸದರಿ ಕಾಲೇಜುಗಳ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಜಿಲ್ಲೆಯ ವಿವಿಧ ಅನುಷ್ಠಾನ ಸಂಸ್ಥೆಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ತ್ವರಿತವಾಗಿ ಕಾಮಗಾರಿಗಳನ್ನು ಪೂರೈಸಿ ಉಪಯುಕ್ತತಾ ಇಲಾಖೆಗೆ ಹಸ್ತಾಂತರಿಸಲು ಸೂಚಿಸಿದೆ.
2. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಪಿಯುಇ/ಕಟ್ಟಡ-03/ಮೂಸೌ/ಮಾಹಿತಿ-01/2018-19 ದಿನಾಂಕ: 21-06-2018ರಲ್ಲಿ ಅನುಷ್ಠಾನಗೊಳ್ಳುತ್ತಿರುವ ಕಾಮಗಾರಿಗಳ ಭೌತಿಕ ಪ್ರಗತಿಯನ್ನು ಖುದ್ದಾಗಿ ಪರಿಶೀಲಿಸುವ ಸಲುವಾಗಿ ಜಿಲ್ಲಾ ಉಪನಿರ್ದೇಶಕರನ್ನು ಒಳಗೊಂಡಂತೆ ಇಬ್ಬರು ಹಿರಿಯ ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರೆಗಳ ತ್ರಿಸದಸ್ಯ ಸಮಿತಿಯನ್ನು ರಚಿಸಿಕೊಂಡು, ಪ್ರತಿ ಕಾಮಗಾರಿಯ ಸ್ಥಳಕ್ಕೆ ಭೇಟಿ ನೀಡಿ ಭೌತಿಕ ಪ್ರಗತಿಯ ವರದಿಯನ್ನು ಹಾಗೂ ಸದರಿ ಸಮಿತಿಯು, ಅನುಷ್ಠಾನ ಸಂಸ್ಥೆಗಳೊಂದಿಗೆ ನಿಕಟ ಸಂಪರ್ಕ ಹೊಂದಿ ಕಾಮಗಾರಿಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ಕ್ರಮಕೈಗೊಂಡು ಉಪಯೋಗ್ಯತಾ ಇಲಾಖೆಗೆ ಹಸ್ತಾಂತರಿಸುವ ಕುರಿತು ಕ್ರಮವಹಿಸುವಂತೆಯೂ ಸಹ ಸೂಚಿಸಲಾಗಿದೆ.
3. ಕಾಮಗಾರಿಗಳ ಅನುಷ್ಠಾನಾಧಿಕಾರಿಗಳಿಗೆ, ಸರ್ಕಾರದ ಆದೇಶದಂತೆ, ಸರ್ಕಾರಿ ಪದವಿಪೂರ್ವ ಕಾಲೇಜುಗಳ ಕಟ್ಟಡ/ತರಗತಿ ಕೊಠಡಿ/ಪ್ರಯೋಗಾಲಯ ಕೊಠಡಿ ಮತ್ತು ಇತ್ಯಾದಿಗಳ ಅಳತೆಯನ್ನು ತಿಳಿಸಿದ್ದು, ಅದೇ ಮಾದರಿಗೆ ತಕ್ಕಂತೆ ತಮ್ಮ ವಲಯದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪದವಿಪೂರ್ವ ಕಾಲೇಜುಗಳ ಕಾಮಗಾರಿಗಳಿಗೆ ಸದರಿ ಕಾಲೇಜುಗಳ ಪ್ರಾಂಶುಪಾಲರೊಂದಿಗೆ ಚರ್ಚಿಸಿ ಅಂದಾಜು ಪಟ್ಟಿ ಮತ್ತು ನಕಾಶೆಯನ್ನು ಸಿದ್ಧಪಡಿಸಿ ಸಲ್ಲಿಸಲು ಸೂಚಿಸಲಾಗಿದೆ. ಮತ್ತು ಅಂದಾಜು ಪಟ್ಟಿಯಲ್ಲಿ ಅನುದಾನ ಮಿತಿಯೊಳಗೆ ರ್‍ಯಾಂಪ್ ಅಳವಡಿಕೆ, ಶೌಚಾಲಯಕ್ಕೆ ನೀರಿನ ಸಂಪರ್ಕ ವ್ಯವಸ್ಥೆ ಹಾಗೂ ವಿದ್ಯುದೀಕರಣ ಇತ್ಯಾದಿಗಳನ್ನು ಕಡ್ಡಾಯವಾಗಿ ಅಳವಡಿಸಲು ತಿಳಿಸಿ, ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರು ಅದರಂತೆ ಸಿದ್ಧಪಡಿಸಿರುವ ಅಂದಾಜುಪಟ್ಟಿಯಲ್ಲಿ ದೃಢೀಕರಿಸಿದ ನಂತರ ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಸಲು ಸೂಚಿಸಲಾಗಿದೆ. ಈ ನಿಟ್ಟಿನಲ್ಲಿ ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರು ಕ್ರಮವಹಿಸುವುದು.
4. ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು ಸದರಿ ಕಾಲೇಜುಗಳ ಮುಖ್ಯಸ್ಥರು ಆಗಿರುವುದರಿಂದ ಕಾಮಗಾರಿಗಳ ಪ್ರಗತಿಯ ಬಗ್ಗೆ ಪೂರ್ಣ ಜವಾಬ್ದಾರಿಯನ್ನು ವಹಿಸಿಕೊಂಡು ಪ್ರತಿ ಮೂರು ತಿಂಗಳಿಗೊಮ್ಮೆ ಕಾಮಗಾರಿಗಳ ಪ್ರಗತಿಯನ್ನು ಜಿಲ್ಲಾ ಉಪನಿರ್ದೇಶಕರುಗಳಿಗೆ ಸಲ್ಲಿಸುವುದು. ಹಾಗೂ ಕಾಮಗಾರಿಯು ಕುಂಠಿತವಾಗಿದ್ದರೆ ಅನುಷ್ಠಾನಾಧಿಕಾರಿಗಳೊಡನೆ ನಿಕಟ ಸಂಪರ್ಕ ಹೊಂದಿ ಕಾಮಗಾರಿಯನ್ನು ತೀವ್ರಪ್ರಗತಿಯ ಪ್ರಗತಿಗೆ ಸಮನ್ವಯ ಸಾಧಿಸುವುದು.

5. ಈ ನಿಟ್ಟಿನಲ್ಲಿ ಕಾಮಗಾರಿಗಳ ಬಗ್ಗೆ ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರು ವೈಯಕ್ತಿಕವಾಗಿ ಗಮನಹರಿಸಿ, ಕಾಮಗಾರಿಯ ಕಳಪೆ ಗುಣಮಟ್ಟ ಹಾಗೂ ಇತರ ಸಮಸ್ಯೆಗಳನ್ನು ಒಳಗೊಂಡಂತೆ ಕಾಮಗಾರಿಯ ಭೌತಿಕ ವರದಿಯನ್ನು ಜಿಲ್ಲಾ ಉಪನಿರ್ದೇಶಕರುಗಳಿಗೆ ಸಲ್ಲಿಸುವುದು. ಜಿಲ್ಲಾ ಉಪನಿರ್ದೇಶಕರು ಅನುಷ್ಠಾನ ಸಂಸ್ಥೆಗಳೊಂದಿಗೆ ಚರ್ಚಿಸಿ ಪರಿಹಾರೋಪಾಯಗಳೊಂದಿಗೆ ನಿರ್ಣಯ ಕೈಗೊಳ್ಳುವುದು.
6. ವಿವಿಧ ಯೋಜನೆಗಳಡಿ ಅನುಷ್ಠಾನಗೊಳ್ಳುತ್ತಿರುವ ಕಾಮಗಾರಿಗಳ ಆರ್ಥಿಕ ಪ್ರಗತಿಗೆ ಸಂಬಂಧಿಸಿದಂತೆ ಹಣ ಬಳಕೆ ಪ್ರಮಾಣಪತ್ರಗಳನ್ನು ಹಾಗೂ ನಬಾರ್ಡ್ ಸಹಯೋಗದಿಂದ ಆರ್.ಐ.ಡಿ.ಎಫ್.ವತಿಯಿಂದ ಅನುಷ್ಠಾನಗೊಳ್ಳುತ್ತಿರುವ ಕಾಮಗಾರಿಗಳ ಕುರಿತು ಮರುಪಾವತಿ ಕ್ಲೇಮುಗಳನ್ನು ನಿಗದಿತ ನಮೂನೆಯಲ್ಲಿ ಸಲ್ಲಿಸುವುವಂತೆ ಸಂಬಂಧಿಸಿದ ಕಾರ್ಯಪಾಲಕ ಅಭಿಯಂತರರನ್ನು ಸಂಪರ್ಕಿಸಿ ಚರ್ಚಿಸಿ ಕೇಂದ್ರ ಕಛೇರಿಗೆ ಸಲ್ಲಿಸುವ ಕುರಿತು ಕ್ರಮವಹಿಸುವುದು.
7. ಅನುಷ್ಠಾನಗೊಳ್ಳುತ್ತಿರುವ ಕಾಮಗಾರಿಗಳ ಕುರಿತು ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರುಗಳು ಸಮರ್ಪಕ ರೀತಿಯಲ್ಲಿ ಕಾಮಗಾರಿಗಳ ಪ್ರಗತಿಯ ಬಗ್ಗೆ ವೈಯಕ್ತಿಕವಾಗಿ ನಿಗಾ ವಹಿಸದಿರುವುದು ಕಂಡುಬರುತ್ತಿದೆ ಹಾಗೂ ಕಾಮಗಾರಿ ಪೂರ್ಣಗೊಂಡ ನಂತರ ಕಾಮಗಾರಿಯ ಭೌತಿಕ ಪ್ರಗತಿಯ ಬಗ್ಗೆ ಪತ್ರದ ಮುಖೇನ ದೂರುಗಳು ಸಲ್ಲಿಸುತ್ತಿರುವುದು ಇಲಾಖೆ ಗಮನಕ್ಕೆ ಬಂದಿರುತ್ತದೆ. ಇಂತಹ ದೂರುಗಳಿಗೆ ಆಸ್ಪದ ನೀಡದೆ, ಕಾಮಗಾರಿ ಪ್ರಗತಿಯಲ್ಲಿರುವಾಗಲೇ ತಾವುಗಳು ಪೂರ್ಣ ಜವಾಬ್ದಾರಿಯಿಂದ ಅನುಷ್ಠಾನ ಸಂಸ್ಥೆಯೊಂದಿಗೆ ನಿಕಟ ಸಂಪರ್ಕ ಹೊಂದಿ ಕಾಮಗಾರಿಯ ಪ್ರಗತಿಗೆ ಗಮನ ವಹಿಸುವುದು,
8. ಕೆಲವು ಕಾಲೇಜುಗಳ ಪ್ರಾಂಶುಪಾಲರು ತಮ್ಮ ಕಾಲೇಜುಗಳಿಗೆ ಸಂಬಂಧಿಸಿದಂತೆ ಮಂಜೂರಾದ ಕಾಮಗಾರಿಗಳ ಬಗ್ಗೆ ಮಾಹಿತಿಯೇ ಇರುವುದಿಲ್ಲವೆಂದು ತಿಳಿದು, ಕಾಮಗಾರಿಯ ಪ್ರಗತಿ ಬಗ್ಗೆ ಜವಾಬ್ದಾರಿಯುತವಾಗಿ ಹಾಗೂ ಸಮರ್ಪಕವಾಗಿ ವರ್ತಿಸದಿರುವುದು ಕಂಡು ಬರುತ್ತಿದೆ. ಇನ್ನು ಮುಂದೆ ಇಂತಹ ಯಾವುದೇ ಕಾರಣಗಳನ್ನು ಹುಡುಕದೇ ಜಿಲ್ಲಾ ಉಪನಿರ್ದೇಶಕರ ಕಚೇರಿಯಲ್ಲಿ ಮಾಹಿತಿಯನ್ನು ಪಡೆದು ಕಾಮಗಾರಿಗಳ ಪ್ರಗತಿಗೆ ತಾವೂ ಕೂಡ ನಿಕಟವಾಗಿ ತೊಡಗಿಸಿಕೊಳ್ಳುವುದು. ಇಲ್ಲವಾದಲ್ಲಿ ಸದರಿ ಕಾಲೇಜುಗಳ ಕಾಮಗಾರಿಗಳ ಕುಂಠಿತ ಪ್ರಗತಿಗೆ ಹಾಗೂ ಕಾಮಗಾರಿ ಗುಣಮಟ್ಟಕ್ಕೆ ನೀವು ಕಾರಣವಾಗಿರುತ್ತೀರೆಂದು ಭಾವಿಸಿ ನಿಮ್ಮ ಮೇಲೆ ಶಿಸ್ತು ಕ್ರಮ ಕೈಗೊಳ್ಳಲಾಗುವುದು.

Snehal

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ಇವರಿಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರುಗಳಿಗೆ, ಪದವಿ ಪೂರ್ವ ಶಿಕ್ಷಣ ಇಲಾಖೆ,
2. ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ-ಜಿಲ್ಲಾ ಉಪನಿರ್ದೇಶಕರುಗಳ ಮೂಲಕ